# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀಮತಿ ಭಾರತಿ ಶೆಟ್ಟಿ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 251

ಉತ್ತರಿಸಬೇಕಾದ ದಿನಾಂಕ : 14.09.2021

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೇಂದ್ರ ಸರ್ಕಾರವು ಪ್ರತ್ಯೇಕ ಸಹಕಾರಿ ಸಚಿವಾಲಯ ಸೃಜಿಸಿರುವುದರಿಂದ, ರಾಜ್ಯದಲ್ಲಿ ಸಹಕಾರಿ ಕ್ಷೇತ್ರ ವಿಸ್ತರಣೆಗೆ ರಾಜ್ಯ ಸರ್ಕಾರದ ಕ್ರಮಗಳೇನು; | ಕೇಂದ್ರ ಸರ್ಕಾರವು ಪ್ರತ್ಯೇಕ ಸಹಕಾರಿ ಸಚಿವಾಲಯ ಸೃಜಿಸಿದ್ದು, ಸಹಕಾರ ಕ್ಷೇತ್ರದ ಬಲವರ್ಧನೆಗಾಗಿ ಕೇಂದ್ರ ಸರ್ಕಾರದ ಸಹಕಾರ ಸಚಿವರಿಗೆ ಕೆಳಕಂಡ ಅಂಶಗಳ ಬಗ್ಗೆ ಮನವಿ ಸಲ್ಲಿಸಲಾಗಿದೆ.<br>➢ ಸಹಕಾರ ಅಭಿವೃದ್ಧಿಗೆ ಸೂಕ್ತ ಮಾರ್ಗದರ್ಶನ ನೀಡಿ ಸಹಕಾರಿ ಕ್ಷೇತ್ರವನ್ನು ಬಲಪಡಿಸಲು ಹಾಗೂ ಗ್ರಾಮೀಣ ಉದ್ಯಮಶೀಲತೆಯನ್ನು ಪ್ರೋತ್ಸಾಹಿಸಲು ಅನುಕೂಲವಾಗುವಂತೆ ರಾಷ್ಟ್ರಮಟ್ಟದಲ್ಲಿ ಸಂಸ್ಥೆಯೊಂದನ್ನು ಸ್ಥಾಪಿಸುವುದು.<br>➢ ಬಹುರಾಜ್ಯ ವ್ಯಾಪ್ತಿಯ ಸಹಕಾರ ಸಂಘಗಳ ಸಹಕಾರದೊಂದಿಗೆ ಕೃಷಿ ಉತ್ಪನ್ನಗಳು ಸೇರಿದಂತೆ, ಸಹಕಾರಿ ಸಂಘಗಳ ಮೂಲಕ ಸಂಗ್ರಹಿಸಲಾಗುವ ಕಿರು ಅರಣ್ಯ ಉತ್ಪನ್ನಗಳು ಮತ್ತು ಕಚ್ಚಾ ಸಾಮಾಗ್ರಿಗಳನ್ನು ಸಂಸ್ಕರಿಸಿ, ಮೌಲ್ಯವರ್ಧನೆಗೊಳಿಸಿ ಉತ್ಪನ್ನಗಳ ಬೇಡಿಕೆ ಹೆಚ್ಚಿಸಲು ಅಂತರ್‌ರಾಜ್ಯ ಮತ್ತು ಅಂತಾರಾಷ್ಟ್ರೀಯ ಮಾರುಕಟ್ಟೆ ಒದಗಿಸುವ ಮೂಲಕ ಉತ್ತಮ ಧಾರಣೆ ದೊರೆಯಲು ಅನುಕೂಲವಾಗುವಂತಹ ಕಾರ್ಯಕ್ರಮಗಳನ್ನು ರೂಪಿಸುವುದು.<br>➢ ಕೃಷಿ ಉತ್ಪನ್ನ ಸೇರಿದಂತೆ, ಹೈನುಗಾರಿಕೆ ಮತ್ತು ಕೃಷಿ ಸಂಬಂಧಿತ ಉಪ ಚಟವಟಿಕೆಗಳಲ್ಲಿ ಆಧುನಿಕ ತಂತ್ರಜ್ಞಾನ ಅಳವಡಿಸುವ ಮೂಲಕ ಕಡಿಮೆ ವೆಚ್ಚದಲ್ಲಿ ಹೆಚ್ಚಿನ ಕೃಷಿ ಇಳುವರಿ ತರುವಂತಹ ಕಾರ್ಯಕ್ರಮಗಳನ್ನು ರೂಪಿಸುವುದು. ಇದಕ್ಕಾಗಿ ರೈತರಿಗೆ ಬೇಕಾಗುವ ತಾಂತ್ರಿಕ ಸೌಲಭ್ಯಗಳನ್ನು ಒದಗಿಸಲು ಸಹಕರಿಸುವುದು.<br>➢ ಆದಾಯ ತೆರಿಗೆ ಕಲಂ 80ಪಿ ವಿನಾಯಿತಿಯನ್ನು ಪ್ರಸ್ತುತ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ (ಪ್ಯಾಕ್ಸ್) ಮತ್ತು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ (ಪಿಕಾರ್ಡ್)ಗಳಿಗೆ ಮಾತ್ರ ನೀಡಲಾಗುತ್ತಿದ್ದು, ಎಲ್ಲಾ ರೀತಿಯ ಸಹಕಾರ ಸಂಘಗಳಿಗೂ ವಿಸ್ತರಿಸುವುದು.<br>➢ ಸಹಕಾರ ಸಂಸ್ಥೆಗಳಲ್ಲಿ ಪಾರದರ್ಶಕತೆ ಮತ್ತು ಪರಿಣಾಮಕಾರಿಯಾಗಿ ಕಾರ್ಯನಿರ್ವಹಣೆ ನಿಟ್ಟಿನಲ್ಲಿ ತಂತ್ರಜ್ಞಾನ ಉನ್ನತೀಕರಣಕ್ಕಾಗಿ ಕೇಂದ್ರ ಸರ್ಕಾರದ ನೆರವು ಮತ್ತು ಆರ್ಥಿಕ ಸಹಾಯ ಕೋರಲಾಗಿದೆ. |
| (ಆ) | ಖಾಸಗಿ ಕ್ಷೇತ್ರ ವಿವಿಧ ರಂಗಗಳಲ್ಲಿ ವಿಪರೀತ ಸ್ವಾಮಿತ್ವ ಭಾರಿ ಬಂಡವಾಳ ಹೂಡಿಕೆ ಮೂಲಕ | ರಾಜ್ಯ ಸರ್ಕಾರವು ಸಹಕಾರ ಕ್ಷೇತ್ರದ ಬಲವರ್ಧನೆಗೆ ಸಹಕಾರ ಕ್ಷೇತ್ರದ ವಿವಿಧ ವಲಯದ ಸಹಕಾರ ಸಂಘಗಳಿಗೆ ಆಯವ್ಯಯದಲ್ಲಿ ಅವಕಾಶ ಕಲ್ಪಿಸುವ ಮೂಲಕ ಪ್ರೋತ್ಸಾಹ ನೀಡುತ್ತಿದೆ. |

| | | |
|---|---|---|
| | ಶಕ್ತಿಯಾಗುತ್ತಿರುವ ಹಿನ್ನೆಲೆಯಲ್ಲಿ ಸಹಕಾರ ಕ್ಷೇತ್ರವನ್ನು ಸಮನಾಂತರವಾಗಿ ಬಲಪಡಿಸುವ ಬಗ್ಗೆ ಸರ್ಕಾರದ ಚಿಂತನೆಗಳೇನು; | ಸಹಕಾರ ಸಂಘಗಳಲ್ಲಿ ಕೃಷಿ ಚಟುವಟಿಕೆಗೆ ಸಾಲ ಪಡೆಯುವ ರೈತರಿಗೆ ರೂ.3.00 ಲಕ್ಷದವರೆಗೂ ಹೈನುಗಾರಿಕೆಗೆ ಒಳಗೊಂಡಂತೆ ಅಲ್ಪಾವಧಿ ಕೃಷಿ ಸಾಲವನ್ನು ಶೂನ್ಯ ಬಡ್ಡಿದರದಲ್ಲಿ ಹಾಗೂ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲವನ್ನು ಶೇ3 ರ ಬಡ್ಡಿದರದಲ್ಲಿ ರೂ.10.00 ಲಕ್ಷದವರೆಗೂ ನೀಡುವ ಮೂಲಕ ಕೃಷಿಗೆ ಆಧ್ಯತೆ ನೀಡಲಾಗಿದೆ. ಬಡ್ಡಿ ಸಹಾಯಧನವನ್ನು ಸರ್ಕಾರವೇ ಭರಿಸುತ್ತಿದ್ದು, ಇದಕ್ಕಾಗಿ ಪ್ರತಿವರ್ಷ ರೂ.1100.00 ಕೋಟಿಗೂ ಹೆಚ್ಚಿನ ಮೊತ್ತವನ್ನು ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗುತ್ತಿದೆ.<br><br>ಶೂನ್ಯ ಬಡ್ಡಿದರದಲ್ಲಿ ಮಹಿಳಾ ಸ್ವ-ಸಹಾಯ ಸಂಘಗಳಿಗೆ ಹಾಗೂ ಶೇ 4 ರ ಬಡ್ಡಿದರದಲ್ಲಿ ಪುರುಷ ಸ್ವ-ಸಹಾಯ ಸಂಘಗಳಿಗೆ ರೂ.5.00 ಲಕ್ಷದವರೆಗೆ ಸಾಲ ನೀಡಲಾಗುತ್ತಿದ್ದು, ಗ್ರಾಮೀಣ ಪ್ರದೇಶದ ಮಹಿಳೆಯರು ಹಾಗೂ ನಿರುದ್ಯೋಗ ಪುರುಷರಿಗೆ ಸ್ವ-ಉದ್ಯೋಗ ಹಾಗೂ ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಆರ್ಥಿಕವಾಗಿ ಸದೃಢಗೊಳಿಸಲು ಆಧ್ಯತೆ ನೀಡಲಾಗಿದೆ ಹಾಗೂ ಬಡ್ಡಿ ಸಹಾಯಧನವನ್ನು ಸರ್ಕಾರವೇ ಭರಿಸುತ್ತಿದ್ದು, ಇದಕ್ಕಾಗಿ ಪ್ರತಿವರ್ಷ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗುತ್ತಿದೆ.<br><br>ರೈತರ ಕೊಯ್ಲೋತ್ತರ ಕೃಷಿ ಚಟುವಟಿಕೆಗಳಿಗೆ ಮತ್ತು ರೈತರ ಉತ್ಪನ್ನಗಳಿಗೆ ಉತ್ತಮ ಧಾರಣೆ ದೊರೆಯಲು ಅನುಕೂಲವಾಗುವಂತೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಬಹು ಸೇವಾ ಸಂಸ್ಥೆಗಳಾಗಿ ಅಭಿವೃದ್ಧಿ ಪಡಿಸಿ (PACS as multi Service Centre), PACS ಗಳಲ್ಲಿ ಮೂಲಭೂತ ಸೌಲಭ್ಯ ಒದಗಿಸಲು ಗೋಡೌನ್, ಶೀಥಲೀಕೇಂದ್ರ ನಿರ್ಮಾಣ ಮಾಡಲು ಮತ್ತು ರೈತ ಸೇವಾ ಕೇಂದ್ರಗಳಾಗಿ ಅಭಿವೃದ್ಧಿ ಪಡಿಸಲು ಕೇಂದ್ರ ಸರ್ಕಾರದ (NABARD) ಮೂಲಕ ಕಡಿಮೆ ಬಡ್ಡಿ ದರದಲ್ಲಿ (ಶೇ.4) ಸಾಲ ಒದಗಿಸಲಾಗುತ್ತಿದೆ. ಈ ಯೋಜನೆಗೆ Agri Infrastructure Fund (ಪ್ರತಿ ಯೋಜನೆಗೆ ಗರಿಷ್ಟ ರೂ.2.00 ಕೋಟಿವರೆಗೆ) ಸಂಯೋಜನೆಯೊಂದಿಗೆ ಅಳವಡಿಸಿಕೊಂಡಲ್ಲಿ ನಿವ್ವಳ ಶೇ.1 ರಷ್ಟಾಗುತ್ತದೆ.<br><br>ಕರ್ನಾಟಕದಲ್ಲಿ ಹಾಸನ ಜಿಲ್ಲೆಯ ಉಗನಿ PACS ಆಡಳಿತ ಮಂಡಳಿಯೊಂದಿಗೆ ಗೌರವಾನ್ವಿತ ಪ್ರಧಾನ ಮಂತ್ರಿಗಳು ವಿಡಿಯೋ ಸಂವಾದ ಮೂಲಕ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳನ್ನು ಬಹು ಸೇವಾ ಸಂಸ್ಥೆಗಳಾಗಿ ಅಭಿವೃದ್ಧಿ ಪಡಿಸುವ (PACS as multi service centre) ಯೋಜನೆಯಲ್ಲಿ ರಾಷ್ಟ್ರದಲ್ಲಿ ಪ್ರಥಮವಾಗಿ ಪ್ರಾರಂಭಿಸಿದ್ದು, ರಾಜ್ಯಕ್ಕೆ ಹೆಮ್ಮೆಯ ವಿಷಯವಾಗಿರುತ್ತದೆ. ರಾಜ್ಯ ಸರ್ಕಾರದ ಉತ್ತೇಜನದೊಂದಿಗೆ ರಾಜ್ಯದಲ್ಲಿ ಸುಮಾರು 900 ಪ್ಯಾಕ್ಸ್‌ಗಳಲ್ಲಿ ಈ ಯೋಜನೆ ಪ್ರಾರಂಭಿಸಲಾಗಿದೆ.<br><br>ರಾಜ್ಯವು ಹೈನು ಅಭಿವೃದ್ಧಿಯಲ್ಲಿ ರಾಷ್ಟ್ರದಲ್ಲಿ ಎರಡನೇ ಸ್ಥಾನದಲ್ಲಿದ್ದು, ಪ್ರತಿ ದಿನ ಸುಮಾರು 81 ಲಕ್ಷ ಲೀಟರ್ ಹಾಲು ಉತ್ಪಾದಕರಿಂದ ಸಂಗ್ರಹಿಸಲಾಗುತ್ತಿದ್ದು, ಸದಸ್ಯರು ಸಂಘಗಳಿಗೆ ಸರಬರಾಜು ಮಾಡುವ ಪ್ರತಿ ಲೀಟರ್ ಹಾಲಿಗೆ ರೂ.5/- ಗಳ ಪ್ರೋತ್ರಾಹಧನವನ್ನು ನೀಡಿ ಸಹಕಾರ ಕ್ಷೇತ್ರವನ್ನು ಸರ್ಕಾರವು ಬಲಪಡಿಸುತ್ತಿದೆ. |

| | | |
|---|---|---|
| | | ರೈತರ ಕೃಷಿ ಉತ್ಪನ್ನಗಳನ್ನು ಗೋದಾಮುಗಳಲ್ಲಿ ಸಂಗ್ರಹಿಸಿ ಉತ್ತಮ ಧಾರಣೆ ದೊರೆಯಲು ಅನುಕೂಲವಾಗುವಂತೆ ಸಂಗ್ರಹಣಾ ಶುಲ್ಕದಲ್ಲಿ ಸಾಮಾನ್ಯ ಸದಸ್ಯರಿಗೆ ಶೇ.25 ಮತ್ತು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಸದಸ್ಯರಿಗೆ ಶೇ.50 ರಷ್ಟು ವಿನಾಯಿತಿ ನೀಡಲಾಗುತ್ತಿದೆ. |
| (ಇ) | ಇದೇ ಸಂದರ್ಭದಲ್ಲಿ ಸಹಕಾರಿ ಲೆಕ್ಕಪರಿಶೋಧನಾ ಇಲಾಖೆಯನ್ನು ಯಾವ ರೀತಿಯಲ್ಲಿ ಮತ್ತಷ್ಟು ಸದೃಢ ಪಡಿಸಲಾಗುತ್ತದೆ? (ವಿವರ ಒದಗಿಸುವುದು) | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯನ್ನು ಸದೃಢಗೊಳಿಸುವ ಉದ್ದೇಶದಿಂದ 402 ಲೆಕ್ಕ ಪರಿಶೋಧಕರ ಹುದ್ದೆಗಳ ನೇಮಕಾತಿಗೆ ಕ್ರಮವಿಡಲಾಗುತ್ತಿದೆ. |

**ಸಂಖ್ಯೆ: ಸಿಒ 237 ಸಿಎಲ್‌ಎಸ್ 2021**

(ಎಸ್.ಟಿ ಸೋಮಶೇಖರ್)
ಸಹಕಾರ ಸಚಿವರು